ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 18ಎಸ್‌ಪಿಎಸ್ (01) 2019

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:28/08/2019

**ಹಿಂಬರಹ**

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಆಇ:01 ಟಿಸಿಇ 2019 ಬೆಂಗಳೂರು ದಿ:04/05/2019 ರ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

01.ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನೀಯರಿಂಗ್ ಕಾಲೇಜುಗಳು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ( ಇಲಾಖಾ ವೆಬ್ ಸೈಟ್ ಮೂಲಕ)
02. ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ

ಜಂಟಿನಿರ್ದೇಶಕರು(ಸಿಡಿಸಿ)

1366 (plan)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸರಕು ಸಾಮಗ್ರಿ ಖರೀದಿ ಸಂಬಂಧವಾಗಿ ಸಾದಿಲ್ವಾರು ವೆಚ್ಚದ ಕೈಪಿಡಿ ನಿಯಮಗಳು ನಿಯಮ-55-49(ಎ) ರಲ್ಲಿನ ಮಿತಿಯನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂ:ಆಇ 01 ಟಿ.ಸಿ.ಇ. 2012, ದಿ:21.06.2012.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಬೆಂಗಳೂರು ಇವರ ಪತ್ರ ಸಂ:ಮುಲೆಪ(ಆ) ಅಡಿ/ಆರ್ಥಿಕ ಮಿತಿ/72/2018-19, ದಿ:20.03.2019.

**ಪ್ರಸ್ತಾವನೆ:-**

ಸರ್ಕಾರದ ವಿವಿಧ ಇಲಾಖೆಯಲ್ಲಿನ ಕಛೇರಿಗಳಲ್ಲಿ ಅಗತ್ಯವಿರುವ ಸರಕು ಸಾಮಗ್ರಿಗಳನ್ನು ಮುಕ್ತ ಮಾರುಕಟ್ಟೆಯಲ್ಲಿ ಖರೀದಿಸುವ ಸಲುವಾಗಿ ಸಾದಿಲ್ವಾರು ವೆಚ್ಚದ ಕೈಪಿಡಿ 1958 ನಿಯಮಗಳ ನಿಯಮ 55(49)(ಎ) ರಲ್ಲಿನ ರೂ.500/- ಗಳ ಮಿತಿಯನ್ನು ರೂ.5000/- ಗಳಿಗೆ ಹೆಚ್ಚಿಸಿ ಮೇಲೆ(1) ರಲ್ಲಿ ಓದಲಾದ ಆದೇಶದಲ್ಲಿ ಆದೇಶಿಸಲಾಗಿದೆ.

ಸರಕು ಸಾಮಗ್ರಿಗಳನ್ನು ಮುಕ್ತ ಮಾರುಕಟ್ಟೆಯಲ್ಲಿ ಖರೀದಿಸಲು ಈಗಿರುವ ಮೊತ್ತವು ಸಾಕಾಗುವುದಿಲ್ಲವಾದ್ದರಿಂದ ಈ ಮಿತಿಯನ್ನು ರೂ.5000/- ಗಳಿಂದ ರೂ.25000/- ಗಳಿಗೆ ಹೆಚ್ಚಿಸಬೇಕೆಂದು ಮೇಲೆ(2)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರವನ್ನು ಕೋರಿರುತ್ತಾರೆ.

ಸರಕು ಸಾಮಗ್ರಿಗಳ ದರಗಳು ಏರುತ್ತಿರುವುದರಿಂದ, ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

JD (Plan) / EPS

**ಸರ್ಕಾರದ ಆದೇಶ ಸಂ: ಆಇ: 01 ಟಿಸಿಇ 2019,**

**ಬೆಂಗಳೂರು, ದಿನಾಂಕ:04.05.2019.**

ಸರ್ಕಾರದ ವಿವಿಧ ಇಲಾಖೆಯಲ್ಲಿನ ಕಛೇರಿಗಳಲ್ಲಿ ಅಗತ್ಯವಿರುವ ಸರಕು ಸಾಮಗ್ರಿಗಳನ್ನು ಮುಕ್ತ ಮಾರುಕಟ್ಟೆಯಲ್ಲಿ ಖರೀದಿಸಲು ಸಾದಿಲ್ವಾರು ವೆಚ್ಚ ಕೈಪಿಡಿ 1958 ನಿಯಮಗಳ ನಿಯಮ 55(49)(ಎ) ರಲ್ಲಿನ ಮಿತಿಯನ್ನು ರೂ.5000/- ಗಳಿಂದ ರೂ.10000/- ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ. ರೂ.10000/- ಗಳಿಗೆ ಮೀರಿದ ಖರೀದಿಗಳಿಗೆ ಕೆ.ಟಿ.ಪಿ.ಪಿ. ನಿಯಮ ಅನ್ವಯವಾಗುವುದು.

ಇದನ್ನು ಹೊರತು ಪಡಿಸಿ ಸರಕು ಖರೀದಿಗಾಗಿ ನಿಯಮಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಈ ಬಗ್ಗೆ ಸಾದಿಲ್ವಾರು ವೆಚ್ಚ ಕೈಪಿಡಿ 1958 ನಿಯಮಗಳು ನಿಯಮ 55(49)(ಎ) ತಿದ್ದುಪಡಿ ತರಲು ಪ್ರತ್ಯೇಕವಾಗಿ ಕ್ರಮ ತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4.5.19

(ಹೆಚ್.ಎ. ಶೋಭ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ.
(ಆರ್ಥಿಕ ನಿಯಮಗಳು, ಆಯವ್ಯಯ
ಸಂಕಲನ ಮತ್ತು ಸಮಿತಿ ಶಾಖೆ)

ಪ್ರತಿಗಳು:-

1. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಲಾಗಿದೆ.
2. ಪ್ರಧಾನ ಮಹಾಲೇಖಪಾಲರು, ಲೆಕ್ಕಪತ್ರಗಳು ಮತ್ತು ಹಕ್ಕುಗಳು, ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5326/5369. ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು(ಲೆಕ್ಕ ತನಿಖೆ-1), ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369. ಕರ್ನಾಟಕ ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು(ಲೆಕ್ಕ ತನಿಖೆ-2), ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369. ಕರ್ನಾಟಕ ಬೆಂಗಳೂರು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ (ಖಜಾನೆ-2) 7ನೇ ಮಹಡಿ. ವಾಣಿಜ್ಯ ತೆರಿಗೆ ಇಲಾಖೆ 1ನೇ ಮುಖ್ಯ ರಸ್ತೆ ಗಾಂಧಿ ನಗರ ಬೆಂಗಳೂರು-560009.
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಎಲ್ಲಾ ಜಿಲ್ಲಾಧಿಕಾರಿಗಳು.
11. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ.
12. ಎಲ್ಲಾ ಜಿಲ್ಲಾ ಖಜಾನೆಗಳಾಧಿಕಾರಿಗಳು.
13. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು.
14. ಉಪ ನಿರ್ದೇಶಕರು, ಟಿಎನ್‌ಎಂಸಿ ಖನಿಜ ಭವನ, ಬೆಂಗಳೂರು.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.